# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ-164//2022-23 ದಿನಾಂಕ: 18-06-2022

### ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020-21, ದಿನಾಂಕ: 21-09-2020ರ ಆದೇಶದಂತೆ ದಿನಾಂಕ: 18-06-2022 ರಂದು ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಜೂನ್ ತಿಂಗಳ 3ನೇ ಶನಿವಾರದ 2ನೇ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಸಂಜೆ 4.00 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ಎಂ. ರಮೇಶ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-164, ವಿದ್ಯಾಪೀಠ |
| 3 | ಶ್ರೀ ಸುದರ್ಶನ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 4 | ಡಾ॥ ವಿನಿತ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 5 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್-164, ವಿದ್ಯಾಪೀಠ |
| 6 | ಶ್ರೀ ಸುನಿಲ್ ಕುಮಾರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 7 | ಶ್ರೀ ಎಂ. ಸುರೇಶ್ | ಕಂದಾಯ ಪರಿವೀಕ್ಷರು, ವಾರ್ಡ್ ನಂ. 164 |
| 8 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 9 | ಶ್ರೀ ಸುದರ್ಶನ್ ಡಿ.ಎನ್ | ಸಹಾಯಕ ಅಭಿಯಂತರರು, ಬೆಸ್ಕಾಂ |
| 10 | ಶ್ರೀ ಧವಳೇಶ್ ಬಿ | ಸಹಾಯಕ ಅಭಿಯಂತರರು, ಬೆಸ್ಕಾಂ |
| 11 | ಶ್ರೀ ಸುದರ್ಶನ್ | ಸಹಾಯಕ ಅಭಿಯಂತರರು, ಬಿ.ಡಬ್ಲು.ಎಸ್.ಎಸ್.ಬಿ |
| 12 | ಶ್ರೀಮತಿ ಕುಮುದ ಹೆಚ್ | ಕಿರಿಯ ಅಭಿಯಂತರು, ಬಿ.ಡಬ್ಲು.ಎಸ್.ಎಸ್.ಬಿ |
| 13 | ಶ್ರೀ ಸಾಯಿಕುಮಾರ್ | ಸಾರ್ವಜನಿಕರು |
| 14 | ಶ್ರೀ ಯೋಗಾನಂದ ಸಿ.ಎಸ್ | ಸೂಪರ್‌ವೈಸರ್ |
| 15 | ಶ್ರೀಮತಿ ಭಾಗ್ಯಮ್ಮ | ಸಾರ್ವಜನಿಕರು |
| 16 | ಶ್ರೀ ಲೋಕೇಶ್ | ಸಾರ್ವಜನಿಕರು |
| 17 | ಶ್ರೀ ಮನೋಜ್ ಪಾಪಣ್ಣ | ಸಾರ್ವಜನಿಕರು |
| 18 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಪೇದಾರ್ |
| 19 | ಶ್ರೀ ನಿಖಿಲ್ ಗೌಡ | ಸಾರ್ವಜನಿಕರು |
| 20 | ಶ್ರೀ ಮಲ್ಲಿಕಾರ್ಜುನ | ಮಾರ್ಷಲ್ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ. ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ಅಕಾಲಿಕ ಮಳೆಯಿಂದ ವಾರ್ಡ್ ವ್ಯಾಪ್ತಿಯ 3ನೇ ಕ್ರಾಸ್, ಅಶೋಕನಗರ ಮತ್ತು ಸುತ್ತಮುತ್ತಲಿನ ರಸ್ತೆಗಳಲ್ಲಿ ಹಾಗೂ ಚೆನ್ನಮ್ಮನಕೆರೆ ಅಚ್ಚುಕಟ್ಟು ಬಡಾವಣೆಯು ಸೇರಿದಂತೆ ಹಲವು ಕಡೆಗಳಲ್ಲಿ ಮರಗಳ ರೆಂಬೆಕೊಂಬೆಗಳು ಬಿದ್ದಿದ್ದು, ಅವುಗಳನ್ನು ತಕ್ಷಣ ತೆರವುಗೊಳಿಸಿ ಸಂಚಾರಕ್ಕೆ ಅನುವು ಮಾಡಿಕೊಡಲು ಅಧ್ಯಕ್ಷರು ಸಭೆಯಲ್ಲಿ ಸೂಚಿಸಿರುತ್ತಾರೆ. ಹಾಗೂ ಮರಗಳಿಗೆ ಹೊಂದಿಕೊಂಡಿರುವ ವಿದ್ಯುತ್ ಕೇಬಲ್‌ಗಳನ್ನು ತೆರವುಗೊಳಿಸುವಂತೆಯೂ ವಿದ್ಯುತ್ ತಂತಿಗೆ ಮರದ ರೆಂಬೆಕೊಂಬೆಗಳು ತಾಗದಂತೆ ಸಾರ್ವಜನಿಕರು ಸಭೆಯ ಗಮನಕ್ಕೆ ತಂದಿದ್ದು, ಅಧ್ಯಕ್ಷರು ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ಈ ವಿಷಯದ ಬಗ್ಗೆ ಕ್ರಮವಹಿಸುವಂತೆ ಸಭೆಯಲ್ಲಿ ತಿಳಿಸಲಾಯಿತು.

2. ವಾರ್ಡ್‌ನಲ್ಲಿ ಕೋವಿಡ್–19 ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆಯವರಿಗೆ ಸಮರ್ಪಕವಾಗಿ ಔಷಧಿ ಸಿಂಪಡಣೆ ಕಾರ್ಯಗಳನ್ನು ಕೈಗೊಳ್ಳಲು ಸೂಚಿಸಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಜನಸಂದಣಿ ಪ್ರದೇಶಗಳಲ್ಲಿ ಸಾರ್ವಜನಿಕ ಸಾಮಾಜಿಕ ಅಂತರ (Social Distance) ಕಾಪಾಡಿಕೊಳ್ಳುವುದು ಹಾಗೂ ಮಾಸ್ಕ ಧರಿಸುವುದರ ಬಗ್ಗೆ ಅರಿವು ಮೂಡಿಸಲು ಹಾಗೂ ಕ್ರಮಕೈಗೊಳ್ಳಲು ಮಾರ್ಷಲ್‌ಗಳಿಗೆ ಇನ್ನು ಹೆಚ್ಚಿನ ರೀತಿಯಲ್ಲಿ ಗಸ್ತು ಮಾಡುವಂತೆ ಸೂಚಿಸಲಾಗಿರುತ್ತದೆ, ಕೋವಿಡ್ ಪರೀಕ್ಷೆಗಳನ್ನು ಸಮರ್ಪಕವಾಗಿ ನಡೆಸಲು ಸೂಚಿಸಿರುತ್ತಾರೆ ಹಾಗೂ ಕೋವಿಡ್ ಲಸಿಕಾ ಕಾರ್ಯಕ್ರಮವನ್ನು ಸಮರ್ಪಕವಾಗಿ ನಿರ್ವಹಿಸಿದ್ದು, ದಿನಾಂಕ: 18–06–2022 ವರೆಗೆ ಕೋವಿಡ್ ಲಸಿಕೆಯ ವಿಶೇಷ ಅಭಿಯಾನವನ್ನು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಹಮ್ಮಿಕೊಂಡಿದ್ದು, 12 ರಿಂದ 18 ವರ್ಷದ ಮಕ್ಕಳಿಗೆ ಒಟ್ಟು 800 ಜನರಿಗೆ ಕೋಬ್ರೆವ್ಯಾಕ್ಸ್ ಲಸಿಕೆಯನ್ನು ನೀಡಲಾಗಿದೆ ಎಂದು, 180 ಜನರಿಗೆ ಕೋವ್ಯಾಕ್ಸಿನ್‌ನ್ನು ಮತ್ತು 170 ಜನರಿಗೆ ಕೋವಿಶೀಲ್ಡ್ ಲಸಿಕೆಯನ್ನು ಹಾಗೂ 60 ವರ್ಷ ಮೇಲ್ಪಟ್ಟ ಒಟ್ಟು 208 ಜನರಿಗೆ ಬೂಸ್ಟರ್ ಡೋಸ್ ನೀಡಲಾಗಿದೆ ಎಂದು ಡಾ॥ ವಿನಿತ ರವರ ಸಭೆಯಲ್ಲಿ ಅಧ್ಯಕ್ಷರಿಗೆ ತಿಳಿಸಿರುತ್ತಾರೆ.

3. ವಾರ್ಡ್ ವ್ಯಾಪ್ತಿಯಲ್ಲಿ ಕಳೆದ ಜೂನ್ ತಿಂಗಳಲ್ಲಿ ನಡೆದ ಮೊದಲನೇ ವಾರದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ಹಿರಿಯ ಆರೋಗ್ಯ ಪರಿವೀಕ್ಷಕರು ಘನತ್ಯಾಜ್ಯ ನಿರ್ವಹಣೆಯ ಬಗ್ಗೆ ಆಗುತ್ತಿರುವ ಕೆಲಸ ಕಾರ್ಯಗಳು ಮತ್ತು ವರದಿಗಳು ಸೇರಿದಂತೆ ಪೌರಕಾರ್ಮಿಕರ ಹಾಜರಾತಿ, ಕಾಂಪ್ಯಾಕ್ಟರ್ ವಾಹನಗಳು ಮತ್ತು ಆಟೋಗಳ, ಇನ್ನಿತರೆ ವಾಹನಗಳ ಹಾಜರಾತಿಯನ್ನು ಕೋರಿದ್ದು, ಅವುಗಳನ್ನು ಮಾನ್ಯ ಅಧ್ಯಕ್ಷರಿಗೆ ಸಲ್ಲಿಸಿ ವರದಿ ನೀಡಿರುತ್ತಾರೆ.

4. ವಾರ್ಡ್ ವ್ಯಾಪ್ತಿಯಲ್ಲಿನ ಸಾರ್ವಜನಿಕರು ಕಂಪ್ಯೂಟರ್ ಕಲಿಕಾ ಕೇಂದ್ರವನ್ನು ಸ್ಥಾಪಿಸಿರುವ ಬಗ್ಗೆ ಮಾಹಿತಿಯನ್ನು ಹಾಗೂ ಕಲಿಕಾ ತರಬೇತಿ ನಡೆಸಿರುವ ಬಗ್ಗೆ ಮಾಹಿತಿಯನ್ನು ಕೋರಿದ್ದು, ಸದರಿ ಮಾಹಿತಿಯು ಸಂಬಂಧಪಟ್ಟ ಕಛೇರಿಯಿಂದ ಸದರಿ ವಿಷಯದ ಬಗ್ಗೆ ವಿವರಗಳನ್ನು ಪಡೆದು ಮುಂದಿನ ಸಭೆಯಲ್ಲಿ ಮಾಹಿತಿಯನ್ನು ನೀಡುವಂತೆ ಅಧ್ಯಕ್ಷರು ಕಾರ್ಯದರ್ಶಿ ಮತ್ತು ಸಂಚಾಲಕರು ರವರಿಗೆ ತಿಳಿಸಿರುತ್ತಾರೆ.

5. ವಾರ್ಡ್ ವ್ಯಾಪ್ತಿಯಲ್ಲಿನ ಮಂಜುನಾಥ ಕಾಲೋನಿ, 3ನೇ ಅಡ್ಡರಸ್ತೆ, ಮನೆ ನಂ. 427ರ ಸಮೀಪದ ಕಾಂಕ್ರೀಟ್ ರಸ್ತೆಯು ನುಣುಪಾಗಿರುವುದನ್ನು ಸಾರ್ವಜನಿಕರು ಸಭೆಯ ಗಮನಕ್ಕೆ ತಂದಿದ್ದು, ಮುಂದುವರೆದು, ಕೆಲಸ ಪರಿವೀಕ್ಷಕರು ಈ ಹಿಂದೆಯೇ ಸದರಿ ಸ್ಥಳವನ್ನು ಪರಿಶೀಲಿಸಿ ಒರಟುಗೊಳಿಸುವುದಾಗಿ ಹಾಗೂ ಹ್ಯಾಂಡ್ ರೈನಿಂಗ್ ಅಳವಡಿಸಲು ಸ್ಟೀಲ್ ಹ್ಯಾಂಡ್ ರೈನಿಂಗ್‌ನ್ನು ಸ್ಥಳದಲ್ಲಿ ಹಾಕಲು ಹೋಗಿದ್ದು, ಸಾರ್ವಜನಿಕರು ಸದ್ಯಕ್ಕೆ ಹಾಕಬಾರದಾಗಿ ವನಂತಿಸಿದ್ದರಿಂದ ಮೆಟ್ಟಿಲುಗಳನ್ನು ಮುಂದಿನ ದಿನಗಳಲ್ಲಿ ನಿರ್ಮಿಸುವಂತೆ ಕೋರಿರುತ್ತಾರೆ ಎಂಬ ವಿಷಯವನ್ನು ಸಭೆಯ ಗಮನಕ್ಕೆ ವಾರ್ಡ್ ಅಭಿಯಂತರರು ತಂದಿರುತ್ತಾರೆ. ಮುಂದುವರೆದು ರಸ್ತೆಗುಂಡಿಗಳನ್ನು ಸಕಾಲದಲ್ಲಿ ಕಾಮಗಾರಿ ಇಲಾಖೆಯಿಂದ ಮುಚ್ಚಲಾಗಿರುತ್ತದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ಅಧ್ಯಕ್ಷರಿಗೆ ತಿಳಿಸಿದರು.

6. ಚೆನ್ನಮ್ಮನ ಕೆರೆ ಅಚ್ಚುಕಟ್ಟು ಬಡಾವಣೆಯಲ್ಲಿ ಹಾಪ್‌ಕಾಮ್ಸ್ ಇರುವ ಜಾಗ ಸೇರಿದಂತೆ ಇಂದಿರಾ ಕ್ಯಾಂಟೀನ್ ಹಿಂಭಾಗ ಇರುವ ಖಾಲಿ ಜಾಗದ ಬಗ್ಗೆ ಪ್ರಸ್ತಾಪಿಸಿದ್ದು, ಸದರಿ ಜಾಗವು ಬಿ.ಡಿ.ಎ ಇಂದ ಬಿ.ಬಿ.ಎಂ.ಪಿಗೆ ಹಸ್ತಾಂತರವಾಗಿದ್ದು, ಮುಂದಿನ ದಿನಗಳಲ್ಲಿ ಲಭ್ಯವಿರುವ ಅನುದಾನವನ್ನು ಬಳಸಿಕೊಂಡು ಅಭಿವೃದ್ಧಿ ಪಡಿಸುವುದಾಗಿ ಕಾಮಗಾರಿ ಇಲಾಖೆಯ ಸಹಾಯಕ ಅಭಿಯಂತರರು ಸಭೆಯಲ್ಲಿ ಅಧ್ಯಕ್ಷರ ಗಮನಕ್ಕೆ ತಂದಿರುತ್ತಾರೆ.

7. ವಾರ್ಡ್ ವ್ಯಾಪ್ತಿಯಲ್ಲಿ ಕಂದಾಯ ಅಧಿಕಾರಿಗಳು ಆದ ಶ್ರೀ ಸುರೇಶ್ ರವರು 2022-23ನೇ ಸಾಲಿನಲ್ಲಿ ರೂ 500-00ಲಕ್ಷ ಬೇಡಿಕೆ ಇದ್ದು ಈ ಇದೂವರೆಗೂ ರೂ: 343.5 ಲಕ್ಷಗಳು ವಸೂಲಾಗಿದ್ದು, ಈ ವಾರದಲ್ಲಿ ರೂ 3.50 ಲಕ್ಷ ಕಂದಾಯ ವಸೂಲು ಮಾಡಿದ್ದು, ಉಳಿದ ಬಾಕಿಯನ್ನು ಶೀಘ್ರವಾಗಿ ವಸೂಲು ಮಾಡುವುದಾಗಿ ಕಂದಾಯ ಅಧಿಕಾರಿಗಳು ಅಧ್ಯಕ್ಷರಿಗೆ ಸಭೆಯಲ್ಲಿ ತಿಳಿಸಿರುತ್ತಾರೆ.

8. ಮಳೆಗಾಲ ಪ್ರಾರಂಭವಾಗಿರುವುದರಿಂದ ರಾತ್ರಿ ವೇಳೆಯಲ್ಲಿ ಉಪವಿಭಾಗಕ್ಕೆ ಒಂದರಂತೆ ಸಿಲ್ಟ್ & ಟ್ರ್ಯಾಕ್ಟರ್‌ನ್ನು ನೇಮಿಸಿದ್ದು, ಮಳೆಗಾಲದಲ್ಲಿ ಬೀಳುವ ಮರದ ರೆಂಬೆಕೊಂಬೆಗಳನ್ನು, ತಗ್ಗು ಪ್ರದೇಶವನ್ನು ಗುರ್ತಿಸಿ ನೀರು ನಿಲ್ಲದಂತೆ ರಾತ್ರಿ ಪಾಳಿಯ ಕೆಲಸ ನಿರ್ವಹಿಸುವ ಸಿಬ್ಬಂದಿಗಳನ್ನು ಉಪಯೋಗಿಸಿಕೊಳ್ಳುವಂತೆ ಹಾಗೂ ಇನ್ನಿತರೆ ಮಳೆಯ ಅವಾಂತರಗಳನ್ನು ತಡೆಯಲು ಕ್ರಮವಹಿಸುವಂತೆ ಅಧ್ಯಕ್ಷರಿಗೆ ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

18/06/2022

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು(ದಕ್ಷಿಣ) ಬೃ.ಬೆ.ಮ.ಪಾಲಿಕೆ, ರವರ ಮಾಹಿತಿಗ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.

3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
7. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.